प्रेस प्रकाशनी PRESS RELEASE

भारतीय रिज़र्व बैंक
RESERVE BANK OF INDIA

वेबसाइट : www.rbi.org.in/hindi
Website : www.rbi.org.in
ई-मेल/email : helpdoc@rbi.org.in

संचार विभाग, केंद्रीय कार्यालय, शहीद भगत सिंह मार्ग, फोर्ट, मुंबई - 400 001
Department of Communication, Central Office, Shahid Bhagat Singh Marg, Fort, Mumbai - 400 001 फोन/Phone: 022 - 2266 0502

07 ನವೆಂಬರ್ 2024

**ಪತ್ರಿಕಾ ಪ್ರಕಟಣೆ**

## ಶ್ರೀ ಚರಣ್ ಸೌಹಾರ್ದ ಕೋ ಆಪರೇಟಿವ್ ಬ್ಯಾಂಕ್ ಲಿಮಿಟೆಡ್, ಬೆಂಗಳೂರು - ಈ ಬ್ಯಾಂಕಿಗೆ ಆರ್ ಬಿ ಐ ವಿತ್ತೀಯ ದಂಡ ವಿಧಿಸಿದೆ

"ಆದಾಯ ಗುರುತಿಸುವಿಕೆ, ಆಸ್ತಿ ವರ್ಗೀಕರಣ, ಅವಕಾಶ ಕಲ್ಪಿಸುವುದು ಮತ್ತು ಇತರ ಸಂಬಂಧಿತ ವಿಷಯಗಳು - ಪಟ್ಟಣ ಸಹಕಾರಿ ಬ್ಯಾಂಕುಗಳು " ಇದರ ಬಗ್ಗೆ ಭಾರತೀಯ ರಿಸರ್ವ್ ಬ್ಯಾಂಕ್ (ಆರ್ ಬಿ ಐ) ನೀಡಿದ ಕೆಲವು ನಿರ್ದೇಶನಗಳ ಮತ್ತು ಮೇಲ್ವಿಚಾರಣಾ ಕ್ರಿಯಾ ಚೌಕಟ್ಟು (SAF) ಅಡಿಯಲ್ಲಿ ನೀಡಿದ ನಿರ್ದೇಶನಗಳ ಅನುಪಾಲನೆ ಮಾಡದೇ ಇದ್ದುದಕ್ಕಾಗಿ ಆರ್ ಬಿ ಐ ತನ್ನ ನವೆಂಬರ್ 5, 2024 ರ ಆದೇಶದ ಮೂಲಕ ಶ್ರೀ ಚರಣ್ ಸೌಹಾರ್ದ ಕೋಆಪರೇಟಿವ್ ಬ್ಯಾಂಕ್ ಲಿಮಿಟೆಡ್, ಬೆಂಗಳೂರು - ಈ ಬ್ಯಾಂಕಿಗೆ (ಬ್ಯಾಂಕು) ರೂ. 2 ಲಕ್ಷ (ರೂ. ಎರಡು ಲಕ್ಷ ಮಾತ್ರ) ವಿತ್ತೀಯ ದಂಡ ವಿಧಿಸಿದೆ. ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ 1949 ರ ಕಲಂ 47 ಎ(1)(ಸಿ ) ಜೊತೆ ಓದಲಾದ ಕಲಂ 46(4) (i) ಮತ್ತು 56 ರ ಅಡಿಯಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್ ಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ದಂಡವನ್ನು ವಿಧಿಸಿದೆ.

ಮಾರ್ಚ್ 31,2023 ರಂದು ಇದ್ದ ಬ್ಯಾಂಕಿನ ಆರ್ಥಿಕ ಪರಿಸ್ಥಿತಿ ಯನ್ನು ಆಧರಿಸಿ ಬ್ಯಾಂಕಿನ ಶಾಸನ ಬದ್ಧ ನಿರೀಕ್ಷಣೆಯನ್ನು ಭಾರತೀಯ ರಿಸರ್ವ್ ಬ್ಯಾಂಕ್ ನಡೆಸಿತು. ಮೇಲೆ ಹೇಳಲಾದ ಆರ್ ಬಿ ಐ ನಿರ್ದೇಶನಗಳ ಅನುಪಾಲನೆ ಆಗದೆ ಇರುವ ಬಗ್ಗೆ ನಿರೀಕ್ಷಣಾ ನಿಷ್ಕರ್ಷೆಯನ್ನು ಮತ್ತು ಈ ಸಂಬಂಧ ನಡೆದ ಪತ್ರ ವ್ಯವಹಾರಗಳನ್ನು ಆಧರಿಸಿ ಬ್ಯಾಂಕಿಗೆ ಈ ನಿರ್ದೇಶನಗಳ ಅನುಪಾಲನೆ ಮಾಡುವಲ್ಲಿ ವಿಫಲವಾದುದಕ್ಕಾಗಿ ಏಕೆ ದಂಡ ವಿಧಿಸಬಾರದು ಎಂದು ಕಾರಣ ಕೇಳಿ ನೋಟೀಸನ್ನು ನೀಡಲಾಗಿತ್ತು. ಬ್ಯಾಂಕು ಈ ಕುರಿತು ಸಲ್ಲಿಸಿದ ಉತ್ತರ ಮತ್ತು ವೈಯಕ್ತಿಕ ವಿಚಾರಣೆಯಲ್ಲಿ ಮಾಡಲಾದ ಮೌಖಿಕ ನಿವೇದನೆಗಳನ್ನು ಪರಿಗಣಿಸಿದ ನಂತರ ಭಾರತೀಯ ರಿಸರ್ವ್ ಬ್ಯಾಂಕಿಗೆ, ಇತರ ವಿಷಯಗಳ ನಡುವೆ, ಬ್ಯಾಂಕಿನ ವಿರುದ್ಧ ಮಾಡಲಾದ ಈ

ಆರೋಪಗಳು ಸ್ಥಿರಪಟ್ಟಿವೆ ಮತ್ತು ವಿತ್ತೀಯ ದಂಡ ವಿಧಿಸುವುದಕ್ಕೆ ಅರ್ಹವಾಗಿವೆ ಎಂದು ಗೊತ್ತಾಯಿತು:

ಬ್ಯಾಂಕು-

(i) ಆದಾಯ ಗುರುತಿಸುವಿಕೆ, ಆಸ್ತಿ ವರ್ಗೀಕರಣ ಮತ್ತು ಅವಕಾಶ ಕಲ್ಪಿಸುವ ಮಾನದಂಡಗಳ ಪ್ರಕಾರ ಕೆಲವು ಸಾಲದ ಖಾತೆಗಳನ್ನು 'ನಿಷ್ಕ್ರಿಯ ಆಸ್ತಿಗಳು' (NPA) ಎಂದು ವರ್ಗೀಕರಿಸುವಲ್ಲಿ ವಿಫಲವಾಗಿತ್ತು.

(ii) ಭಾರತೀಯ ಸ್ಟೇಟ್ ಬ್ಯಾಂಕು ಠೇವಣಿಗಳ ಮೇಲೆ ನೀಡುವ ಬಡ್ಡಿಗಿಂತ ಹೆಚ್ಚಿನ ದರಗಳನ್ನು ಬ್ಯಾಂಕು ನೀಡಿತ್ತು ಮತ್ತು ಮೇಲ್ವಿಚಾರಣಾ ಕ್ರಿಯಾ ಚೌಕಟ್ಟು (SAF) ನಿರ್ದೇಶನಗಳ ಅನುಪಾಲನೆ ಮಾಡದೇ ಹೊಸ ಸಾಲ ಮತ್ತು ಮುಂಗಡಗಳನ್ನು ಮಂಜೂರು ಮಾಡಿತ್ತು.

ನಿಯಂತ್ರಣ ಅನುಪಾಲನೆಯಲ್ಲಿ ಕಂಡುಬಂದ ಕೊರತೆಗಾಗಿ ಮೇಲಿನ ಕ್ರಮವನ್ನು ತೆಗೆದುಕೊಳ್ಳಲಾಗಿದೆಯೇ ವಿನಃ ಇದು ಬ್ಯಾಂಕು ತನ್ನ ಗ್ರಾಹಕರೊಂದಿಗೆ ಮಾಡಿಕೊಂಡ ಯಾವುದೇ ವ್ಯವಹಾರ ಅಥವಾ ಒಪ್ಪಂದದ ಸಿಂಧುತ್ವದ ಬಗೆಗಿನ ಘೋಷಣೆಯಲ್ಲ. ಅಲ್ಲದೆ, ಈ ವಿತ್ತೀಯ ದಂಡ ವಿಧಿಸುವ ಕ್ರಿಯೆಯು ಭಾರತೀಯ ರಿಸರ್ವ್ ಬ್ಯಾಂಕು ಈ ಬ್ಯಾಂಕಿನ ಮೇಲೆ ತೆಗೆದುಕೊಳ್ಳಬಹುದಾದ ಯಾವುದೇ ಇತರ ಕ್ರಮದ ಪೂರ್ವಾಗ್ರಹದಿಂದ ಹೊರತಾಗಿದೆ

**(ಪುನೀತ್ ಪಾಂಚೋಲಿ)**
ಚೀಫ್ ಜನರಲ್ ಮ್ಯಾನೇಜರ್

**ಪತ್ರಿಕಾ ಪ್ರಕಟಣೆ: 2024-2025/1451**